# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 81

ಮಾನ್ಯ ಸದಸ್ಯರ ಹೆಸರು: ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 08.12.2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಶಿಕ್ಷಕರು ಮತ್ತು ಉಪನ್ಯಾಸಕರು ಕರ್ತವ್ಯ ನಿರ್ವಹಿಸುವ ವೇಳೆ ಇವರುಗಳ ಮೇಲೆ ಹೆಚ್ಚಾಗಿ ಹಲ್ಲೆ ನಡೆಯುತ್ತಿದ್ದು, ಇಂತಹ ಎಷ್ಟು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು). | **ಶಾಲಾ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ:-** ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಖಾಸಗಿ ಅನುದಾನಿತ ಪ್ರೌಢಶಾಲೆಗೆ ಸಂಬಂಧಿಸಿದಂತೆ 01 ಪ್ರಕರಣ ಗಮನಕ್ಕೆ ಬಂದಿರುತ್ತದೆ.<br>• ಹೇಮಾವತಿ ಅನುದಾನಿತ ಪ್ರೌಢಶಾಲೆ, ಟಿ.ಕೆ. ಲೇಔಟ್, ಮೈಸೂರು.<br>**ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ:-**<br>ಉಪನ್ಯಾಸಕರ ಮೇಲೆ ಹಲ್ಲೆಯಾಗಿರುವ ಕುರಿತು ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಆ) | ಬಂದಿದ್ದರೆ, ಹಲ್ಲೆ ಮಾಡಿದವರ ಮೇಲೆ ಎಷ್ಟು ಪ್ರಕರಣಗಳು ದಾಖಲಾಗಿವೆ; ಅವುಗಳು ತನಿಖೆ ಯಾವ ಹಂತದಲ್ಲಿದೆ. | ಹೇಮಾವತಿ ವಿದ್ಯಾಸಂಸ್ಥೆ(ರಿ), ಟಿ.ಕೆ. ಲೇಔಟ್, ಮೈಸೂರು ಈ ಸಂಸ್ಥೆಯ ಅಧೀನದಲ್ಲಿ ನಡೆಯುತ್ತಿರುವ ಹೇಮಾವತಿ ಅನುದಾನಿತ ಪ್ರೌಢಶಾಲೆ, ಟಿ.ಕೆ.ಲೇಔಟ್, ಮೈಸೂರು ಈ ಶಾಲೆಯ ಕಾರ್ಯದರ್ಶಿಗಳಾದ ಶ್ರೀ ಸಂತೋಷ ಆರ್ ಬಾಬು ರವರು ಶಾಲೆಯ ಸಹ ಶಿಕ್ಷಕರಾದ ಶ್ರೀ ರವಿಕುಮಾರ್, ರವರ ಮೇಲೆ ದೈಹಿಕ ಹಲ್ಲೆ ಮಾಡಿದ್ದರ ಕುರಿತು ಶಾಲಾ ಆಡಳಿತ ಮಂಡಳಿಯ ಕಾರ್ಯದರ್ಶಿ ವಿರುದ್ಧ ಸ್ಥಳೀಯ ಪೋಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ. ಈ ರೀತಿ ಶಿಕ್ಷಕರಿಗೆ ದೈಹಿಕ ಹಲ್ಲೆ ಮಾಡಿರುವ ಬಗ್ಗೆ ಆಡಳಿತ ಮಂಡಳಿ ವಿರುದ್ಧ ಕಾಯ್ದೆ ಮತ್ತು ನಿಯಮಗಳನ್ವಯ ಅಗತ್ಯ ಕ್ರಮವಹಿಸಿ ವರದಿಯನ್ನು ನೀಡಲು ಉಪನಿರ್ದೇಶಕರು, ಮೈಸೂರು ಜಿಲ್ಲೆ ಇವರಿಗೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರ ಕಛೇರಿಯಿಂದ ದಿನಾಂಕ:17-11-2025ರ ಪತ್ರದಲ್ಲಿ ತಿಳಿಸಲಾಗಿದೆ. |

| | | |
|---|---|---|
| | | ಪ್ರಸ್ತುತ ಈ ಶಾಲೆಯ ಸಿಬ್ಬಂದಿ /ಶಿಕ್ಷಕರು ಮತ್ತು ಆಡಳಿತ ಮಂಡಳಿ ನಡುವೆ ಹೊಂದಾಣಿಕೆ ಇಲ್ಲದಿರುವುದರಿಂದ ಮಕ್ಕಳ ಮತ್ತು ಶಾಲಾ ಶೈಕ್ಷಣಿಕ ಹಿತದೃಷ್ಟಿಯಿಂದ ಆಡಳಿತಾಧಿಕಾರಿ ನೇಮಕ ಮಾಡಲು ಉಪನಿರ್ದೇಶಕರು, ಮೈಸೂರು ಜಿಲ್ಲೆ ರವರಿಂದ ಆಯುಕ್ತಾಲಯದಲ್ಲಿ ಪ್ರಸ್ತಾವನೆ ಸ್ವೀಕೃತವಾಗಿದ್ದು, ಆಡಳಿತಾಧಿಕಾರಿ ನೇಮಕ ಮಾಡಲು ಪರಿಶೀಲಿಸಲಾಗುತ್ತಿದೆ. |
| ಇ) | ಈ ರೀತಿ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಮೇಲೆ ನಡೆಯುತ್ತಿರುವ ಹಲ್ಲೆಯನ್ನು ತಡೆಗಟ್ಟಲು ಸರ್ಕಾರಿ ವೈದ್ಯರ ಮೇಲಿನ ಹಲ್ಲೆಗೆ ಸಂಬಂಧಿಸಿದಂತೆ ಜಾರಿಗೆ ತಂದಿರುವ ಕಟ್ಟುನಿಟ್ಟಿನ ಕಾನೂನು ಕ್ರಮದಂತೆ ಕಾನೂನು ಕ್ರಮವನ್ನು ಜಾರಿಗೆ ತರಲು ಸರ್ಕಾರ ಆಲೋಚನೆ ಮಾಡಿದೆಯೇ? | ಸರ್ಕಾರದ ಹಂತದಲ್ಲಿ ಸದ್ಯಕ್ಕೆ ಇಂತಹ ಯಾವುದೇ ಪ್ರಸ್ತಾವನೆ ಇರುವುದಿಲ್ಲ.<br><br>ಆದರೆ, ಕರ್ತವ್ಯ ನಿರತ ಸರ್ಕಾರಿ ನೌಕರರ ಮೇಲೆ ಹಲ್ಲೆಯಾದಲ್ಲಿ ಅದಕ್ಕೆ ಭಾರತೀಯ ನ್ಯಾಯ ಸಂಹಿತೆಯಲ್ಲಿ ಅವಕಾಶವಿದ್ದು, ಅದರನುಸಾರ ಕ್ರಮವಹಿಸಲಾಗುತ್ತಿದೆ. |

**ಇಪಿ 123 ಪಿಎಂಎ 2025**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು